ಸಾಕ್ಷಿಗೆ ಪ್ರಮಾಣ ವಚನವನ್ನು ದಿಃ21-11-2025 ರಂದು ಬೊಧಿಸಲಾಯಿತು.

ಮುಖ್ಯ ವಿಚಾರಣೆಃ ವಾದಿ ಪರ ಶ್ರೀ ಆರ್ ಎಸ್ ಜೆ ವಕೀಲರಿಂದಃ

ನಾನು ಈ ದಾವೆಯಲ್ಲಿ ವಾದಿ ಇದ್ದು, ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಸಂಗತಿಗಳು ನನಗೆ ಗೊತ್ತಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ. ಮತ್ತು ಪ್ರಮಾಣಪತ್ರದಲ್ಲಿರುವ ವಿಷಯಗಳು ನಾನೇ ಹೇಳಿ ಬರೆಸಿರುತ್ತೇನೆ. ಈ ಪ್ರಮಾಣ ಪತ್ರವನ್ನು ಮುಖ್ಯ ವಿಚಾರಣೆಯ ಭಾಗವಾಗಿ ಪರಿಗಣಿಸಲು ಹಾಜರುಪಡಿಸಿರುತ್ತೇನೆ.

ಹಳೆಹಳ್ಳಗ್ರಾಮ ಸರ್ವೆ ನಂ 60 ಕ್ಕೆ ಸಂಬಂದಿಸಿದಂತೆ 2024-2025 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-1 ಎಂದು, ದಾವಾ ಸರ್ವೆ ನಂಬರಗೆ ಸಂಬಂದಿಸಿದಂತೆ ಗ್ರಾಮ ನಕಾಶೆಯ ದೃಡಿಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ-2 ಎಂದು, ಗುರುತಿಸಲಾಯಿತು.

ಈ ಹಂತದಲ್ಲಿ ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯವನ್ನು ಕೋರಿದ್ದರಿಂದ ಕಾಲಾವಕಾಶ ನೀಡಿ ಮುಂದೂಡಲಾಯಿತು.

(ನನ್ನ ಹೇಳಿಕೆ ಪ್ರಕಾರ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)

**ಓ.ಹೇ.ಕೇ. ಸರಿ ಇದೆ,**

**ಸಹಿ ಇದೆ**

**ಸಿವಿಲ್ ನ್ಯಾಯಾಧೀಶರು ಸಿದ್ದಾಪುರ**